ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1798 (2162)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಸಣ್ಣ ನೀರಾವರಿ ಸಚಿವರು

ವಿಷಯ : ನಾಗಮಂಗಲ ತಾಲ್ಲೂಕಿನ ಸಣ್ಣ ನೀರಾವರಿ ಇಲಾಖೆಯಲ್ಲಿ ನಡೆದಿರುವ ಕಳಪೆ ಕಾಮಗಾರಿ ಬಗ್ಗೆ

(ಅ) ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು ಬೆಳ್ಳೂರು ಹೋಬಳಿ ವ್ಯಾಪ್ತಿಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ 4702-00-101-1-07-139 ಕೆರೆಗಳ ಅಧುನೀಕರಣ ಕಾಮಗಾರಿ ಯೋಜನೆಯಡಿ ಅಯ್ಯನಕೆರೆಯ (ಜೋಡಿಕೆರೆ) ಜೀರ್ಣೋದ್ಧಾರ ಕಾಮಗಾರಿ ಮತ್ತು ನಾಗಮಂಗಲ ತಾಲ್ಲೂಕು ಬೆಳ್ಳೂರು ಹೋಬಳಿ ವ್ಯಾಪ್ತಿಯಲ್ಲಿ ಬರುವ ಆದಿಚುಂಚನಗಿರಿ ಮಠದ ಹತ್ತಿರ ನಾಗರಕೆರೆ ಮತ್ತು ತಪೋವನ ಕಾಮಗಾರಿ ಪೂರೈಸುವ ಅವಧಿ ಮುಗಿದಿದ್ದರು ಈವರೆವಿಗೂ ಕಾಮಗಾರಿ ಪೂರೈಸದೆ ವಿನಾಕಾರಣ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಸದರಿ ಕಾಮಗಾರಿಗಳಲ್ಲಿರುವ ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದೆ ಕಳಪೆ ಕಾಮಗಾರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಸಂಬಂಧ ಕಾಮಗಾರಿ ಗುಣಮಟ್ಟ ಪರಿಶೀಲನಾ ತಂದ ಸದರಿ ಕಾಮಗಾರಿಯನ್ನು ಪರಿಶೀಲಿಸಿದೆಯೇ ;

(ಈ) ಕಳಪೆ ಕಾಮಗಾರಿ ನಿರ್ವಹಿಸಿರುವ ಗುತ್ತಿಗೆದಾರರು ಮತ್ತು ಇದಕ್ಕೆ ನೆರವಾದ ಅಭಿಯಂತರರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)